ಸರ್ಕಾರಿ ಕೋಟಾದಲ್ಲಿ ಶಿಕ್ಷಣ ಪಡೆದು ಗ್ರಾಮೀಣ ಸೇವೆ ಮಾಡದ ವೈದ್ಯರುಗಳ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

25 (251) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಪ್ರವೇಶ ಪಡೆದು ಗ್ರಾಮೀಣ ಸೇವೆಯನ್ನು ಮಾಡುವುದಾಗಿ ಮುಚ್ಚಳಿಕೆ ಬರೆದುಕೊಟ್ಟು ಅದನ್ನು ಉಲ್ಲಂಘಿಸಲಾಗಿರುವ 589 ವೈದ್ಯರುಗಳ ವಿರುದ್ಧ ದಿನಾಂಕ;20.08.2017 ರಂದು ಕೆ.ಎಂ.ಸಿ.ಗೆ ಪತ್ರ ಬರೆಯಲಾದ ಪ್ರಕರಣದಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿಯ ಬಗ್ಗೆ ವಿವರ ನೀಡುವುದು ;

(ಆ) ಷರತ್ತು ಉಲ್ಲಂಘಿಸಿ ಗ್ರಾಮೀಣ ಸೇವೆ ಮಾಡದ ವೈದ್ಯರುಗಳ ಮೇಲೆ ವಿಧಿಸುವ ದಂಡದ ಹಣವನ್ನು ರೂ.1.00 ಕೋಟಿ ರೂಪಾಯಿಗಳಿಗೆ ಏರಿಸಲು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಈ ವಿಷಯವಾಗಿ ಸರ್ಕಾರದ ವಿರುದ್ಧ ಹೈಕೋರ್ಟ್ ವಿಷಾಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಇದರ ಬಗ್ಗೆ ಸರ್ಕಾರದ ಕ್ರಮಗಳೇನು ;

(ಈ) ಗ್ರಾಮೀಣ ಸೇವೆಯನ್ನು ಮಾಡದ ವೈದ್ಯರುಗಳ ಮೇಲೆ ನಿಯಮಾಳಿಗಳ ರೀತ್ಯಾ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)